ಶಾಶ್ವತ ಅನುದಾನರಹಿತ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವುದು.

740 - ಶ್ರೀ ಮಂಜುನಾಥ್ ಸಿ.ಕುನ್ನೂರ್ (ಶಿಗ್ಗಾಂವ್) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಜ್ಯದಲ್ಲಿರುವ ಶಾಶ್ವತ ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು ?

ಆ) ಈ ಅನುದಾನ ರಹಿತ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರದ ಪರಿಶೀಲನೆಯಲ್ಲಿದೆಯೇ ?

ಇ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಪ್ರಾಥಮಿಕ ಶಾಲೆಗಳಲ್ಲಿ : 17984

ಪ್ರೌಢ ಶಾಲೆಗಳಲ್ಲಿ : 19904

ಆ) ಇಲ್ಲ.

ಇ) ಶಾಶ್ವತ ಅನುದಾನರಹಿತ ಷರತ್ತಿನ ಮೇಲೆ ಅನುಮತಿ ನೀಡಿರುವುದರಿಂದ ಈ ಶಾಲೆಗಳನ್ನು ವೇತನ ಅನುದಾನಕ್ಕೆ ಒಳಪಡಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಆದರೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸಂಸ್ಥೆಗಳ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸುವ ವಿಷಯವು ಸಚಿವ ಸಂಪುಟದ ಉಪಸಮಿತಿಯ ಪರಿಶೀಲನೆಯಲ್ಲಿದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಸುಪ್ರೀಂ ಕೋರ್ಟ್ ಮಾರ್ಗದರ್ಶನದಿಂದ ಅರಣ್ಯ ನೀತಿಯ ಮೇಲೆ ಆಗಿರುವ ಪರಿಣಾಮ.

741 - ಶ್ರೀ ಕೆ. ವಿಶ್ವೇಶ್ವರ ಹೆಗ್ಗಡೆ (ಅಂಕೋಲ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1) ಅರಣ್ಯ ನೀತಿಯ ಬಗ್ಗೆ ಸುಪ್ರೀಂ ಕೋರ್ಟಿನ ಮಾರ್ಗದರ್ಶನವೇನಾದರೂ ಇದೆಯೇ ?

2) ಇದ್ದಲ್ಲಿ ಆ ಬಗ್ಗೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ ?

3) ಸುಪ್ರೀಂಕೋರ್ಟ್‌ನ ಮಾರ್ಗದರ್ಶನದಿಂದ ರಾಜ್ಯದ ಅರಣ್ಯದ ಯಾವ ಯಾವ ಉತ್ಪನ್ನಗಳ ಮೇಲೆ ಪರಿಣಾಮವಾಗಲಿದೆ ?

4) ಉತ್ತರ ಕನ್ನಡ ಜಿಲ್ಲೆಯಲ್ಲಿ ಯಾವ ರೀತಿಯ ಪರಿಣಾಮ ಆಗಲಿದೆ ?

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಸಚಿವರು) :

1) ದಿನಾಂಕ 12-12-96 ಮತ್ತು 4-3-97ರ ಆದೇಶದಲ್ಲಿ ಸುಪ್ರೀಂ ಕೋರ್ಟ್ ಆದೇಶ ನೀಡಿರುತ್ತದೆ.

2) ಸುಪ್ರೀಂ ಕೋರ್ಟ್ ಆದೇಶದಂತೆ ಕೇಂದ್ರ ಸರ್ಕಾರದ ಪೂರ್ವಾನುಮತಿ ಇಲ್ಲದೇ ಎಲ್ಲಾ ರೀತಿಯ ಅರಣ್ಯೇತರ ಕಾರ್ಯಗಳನ್ನು ಕಾಯ್ದಿಟ್ಟ ಅರಣ್ಯ ಪ್ರದೇಶದಲ್ಲಿ ಸ್ಥಗಿತಗೊಳಿಸಲಾಗಿದೆ ಮತ್ತು 2 ತಜ್ಞರ ಸಮಿತಿಯನ್ನು ರಚಿಸಲಾಗಿದೆ.

3) ಖನಿಜ ಸಂಪತ್ತುಗಳು ಮತ್ತು ಅರಣ್ಯ ಪ್ರದೇಶದಲ್ಲಿ (ಕಾಯ್ದಿಟ್ಟ ಅರಣ್ಯ) ಕೆಲಸ ಮಾಡುತ್ತಿದ್ದ ಪ್ಲೈವುಡ್ ಕಾರ್ಖಾನೆಗಳ ಮೇಲೆ ಪರಿಣಾಮವಾಗಲಿದೆ.

4) ಉತ್ತರ ಕನ್ನಡ ಜಿಲ್ಲೆಯಲ್ಲಿ ಈ ರೀತಿಯ ಆದೇಶದಿಂದ ಗಣಿ ಖನಿಜ ಉತ್ಪಾದನೆ ಮೇಲೆ ಪರಿಣಾಮ ಬೀರಿದೆ. ಅರಣ್ಯ ಪ್ರದೇಶದಲ್ಲಿ ಬರುವ ಗಣಿಗಾರಿಕೆಯನ್ನು ಬಂದ್ ಮಾಡಿದ ಕಾರಣ ಗಣಿಯಲ್ಲಿ ಕೆಲಸ ಮಾಡುತ್ತಿದ್ದ ಕಾರ್ಮಿಕರಿಗೆ ಕೆಲಸವಿಲ್ಲದಂತಾಗುತ್ತದೆ.

ಅಂಕೋಲ ಕ್ಷೇತ್ರದಲ್ಲಿರುವ ಆಸ್ಪತ್ರೆಗಳಲ್ಲಿ ಖಾಲಿ ಹುದ್ದೆಗಳ ಭರ್ತಿ.

743 - ಶ್ರೀ ಕೆ. ವಿಶ್ವೇಶ್ವರ ಹೆಗ್ಗಡೆ (ಅಂಕೋಲ) : ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಿರ್ಸಿ, ಯಲ್ಲಾಪುರ, ಅಂಕೋಲ ತಾಲ್ಲೂಕಿನ ಆಸ್ಪತ್ರೆಯಲ್ಲಿರುವ ಖಾಲಿ ಹುದ್ದೆಗಳೆಷ್ಟು ?

ಆ) ಖಾಲಿಯಿರುವ ಹುದ್ದೆಗಳನ್ನು ತುಂಬಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ?

ಡಾ|| ಹೆಚ್. ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 1) ತಾಲ್ಲೂಕು ಆಸ್ಪತ್ರೆ, ಸಿರ್ಸಿ - 3

2) ಸಮುದಾಯ ಆರೋಗ್ಯ ಕೇಂದ್ರ,ಯಲ್ಲಾಪುರ - 3

3) ಪ್ರಾ.ಆ.ಫೆ.ಮತ್ತು ಎಸ್‌ಟಿಡಿ ಕ್ಲಿನಿಕ್, ಅಂಕೋಲ - 3

ಒಟ್ಟು **- 9**

ಆ) ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾದ ವೈದ್ಯಾಧಿಕಾರಿಗಳ ಪಟ್ಟಿ ಬಂದಕೂಡಲೇ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುವುದು.